ನೇರಿರುತ್ತದೆ ಕಾಮಗಾರಿಯ ಪ್ರಗತಿಯಲ್ಲಿ ತೀವ್ರ ವಿಳಂಬವಾಗಿದ್ದರಿಂದ ಹಾಗೂ ಕಾಮಗಾರಿಗಳು ಕಳಪೆ ಮಟ್ಟದ್ದಾಗಿದ್ದರಿಂದ ಗುತ್ತಿಗೆಯನ್ನು ಡಿಸೆಂಬರ್ 2006ರಲ್ಲಿ ರದ್ದುಪಡಿಸಿ ಬ್ಯಾಂಕ್ ಗ್ಯಾರಂಟಿಯನ್ನು ನಗದೀಕರಿಸಲಾಗಿತ್ತು ಗುತ್ತಿಗೆ ರದ್ದತಿಯನ್ನು ಪ್ರಶ್ನಿಸಿ ಕರ್ನಾಟಕ ಭೂಸೇನಾ ನಿಗಮವು ಕರ್ನಾಟಕ ಉಚ್ಚ ನ್ಯಾಯಾಲಯದಲ್ಲಿ ರಿಟ್ ಅರ್ಜಿ ಸಲ್ಲಿಸಿದ್ದು, ಈ ಬಗ್ಗೆ ಯಾವುದೇ ಮುಂದಿನ ಕ್ರಮ ಜರುಗಿಸದಂತೆ ಮಾನ್ಯ ಉಚ್ಚ ನ್ಯಾಯಾಲಯವು ಮಧ್ಯಂತರ ಆದೇಶ ನೀಡಿರುತ್ತದೆ ರಿಟ್ ಅರ್ಜಿಯನ್ನು ವಜಾಗೊಳಿಸಲು ಕ್ರಮ ತೆಗೆದುಕೊಳ್ಳಲಾಗಿದೆ

869(404) ಶ್ರೀ ಗೋಪಾಲ ಪೂಜಾರಿ ಕೆ (ಬೈಂದೂರು) ಮಾನ್ಯ ಲೋಕೋಪಯೋಗಿ ಮತ್ತು ಇಂಧನ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜೀವ್ ಗಾಂಧಿ ವಿದ್ಯುತ್ ಸೌಲಭ್ಯ ಯೋಜನೆಯಡಿಯಲ್ಲಿ ಮಂಜೂರಾದ ಉಪ ಗ್ರಾಮಗಳಿಗೆ ವಿದ್ಯುತ್ ಸೌಲಭ್ಯ ನೀಡುವ ಕಾಮಗಾರಿಗಳ ಬಗ್ಗೆ ಟೆಂಡರ್ ಕರೆಯಲಾಗಿದೆಯೇ,

ಆ) ಹಾಗಿದ್ದಲ್ಲಿ, ಕಾಮಗಾರಿಗಳನ್ನು ಯಾವಾಗ ಪ್ರಾರಂಭಿಸಲಾಗುವುದು (ಮಾಹಿತಿ ನೀಡುವುದು)?

ಶ್ರೀ ಹೆಚ್ ಡಿ ರೇವಣ್ಣ (ಲೋಕೋಪಯೋಗಿ ಮತ್ತು ಇಂಧನ ಸಚಿವರು)

ಅ) ಮೆಸ್ಕಾಂ ವ್ಯಾಪ್ತಿಯಲ್ಲಿ ರಾಜೀವ್ ಗಾಂಧಿ ಗ್ರಾಮೀಣ ವಿದ್ಯುದ್ದೀಕರಣ ಯೋಜನೆಯಡಿಯಲ್ಲಿ ಮಂಜೂರಾದ 2268 ಉಪ ಗ್ರಾಮಗಳಿಗೆ ವಿದ್ಯುತ್ ಸೌಲಭ್ಯವನ್ನು ಕಲ್ಪಿಸುವ ಕಾಮಗಾರಿಗಳಿಗೆ ಈಗಾಗಲೇ ಟೆಂಡರ್ ಕರೆಯಲಾಗಿದೆ

ಆ) ಸದರಿ ಟೆಂಡರ್‌ನ ತಾಂತ್ರಿಕ ಮತ್ತು ವಾಣಿಜ್ಯ ಬಿಡ್ಡುಗಳನ್ನು ತೆರೆಯಲಾಗಿದ್ದು, ಟೆಂಡರುಗಳ ಮೌಲ್ಯಮಾಪನವು ಪ್ರಗತಿಯಲ್ಲಿದೆ ಟೆಂಡರ್ ಪ್ರಕ್ರಿಯೆ ನಂತರ ಕಾಮಗಾರಿಯನ್ನು ಪ್ರಾರಂಭಿಸಲು ಪರಿಗಣಿಸಲಾಗುವುದು

872(903) ಶ್ರೀ ಗುರುಪಾದಪ್ಪ ನಾಗಮಾರಪಲ್ಲಿ (ಔರಾದ್) ಮಾನ್ಯ ಲೋಕೋಪಯೋಗಿ ಮತ್ತು ಇಂಧನ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೀದರ್ ಜಿಲ್ಲೆಯ ಔರಾದ್ ತಾಲ್ಲೂಕಿನ ಕರ್ನಾಟಕ ರಸ್ತೆ ಅಭಿವೃದ್ಧಿ ನಿಗಮದಿಂದ ಯಾವ ಯಾವ ರಸ್ತೆಗಳ ಅಭಿವೃದ್ಧಿ ನಿರ್ವಹಣೆಯನ್ನು ತೆಗೆದು ಕೊಳ್ಳಲಾಗಿದೆ,